ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೧	ಬೆಂಗಳೂರು, ಶುಕ್ರವಾರ, ೦೮, ಮೇ, ೨೦೨೬ (ವೈಶಾಖ, ೧೮, ಶಕವರ್ಷ, ೧೯೪೮)	ಸಂಚಿಕೆ ೮೬
Volume - 161	BENGALURU, FRIDAY, 08, MAY, 2026 (VAISHAKHA , 18, SHAKAVARSHA, 1948)	Issue 86

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಜ್ಯೋತಿಪಣ ಯುವಜನ ಸಂಘ, ಗಾಣಿಗಾರ ವಿದ್ಯಾರ್ಥಿ ನಿಲಯ 6ನೇ ಮುಖ್ಯ ರಸ್ತೆ, ಈಜುಕೊಳದ ರಸ್ತೆ, ಸರಸ್ವತಿಪುರಂ, ಮೈಸೂರು ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ 27(ಎ)ರಡಿ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ:ಸಿಒ 12 ಸಿಎಸ್‌ಆರ್ 2023, ದಿನಾಂಕ:16.03.2023.
2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:6876/2023ರಲ್ಲಿ ದಿನಾಂಕ:06.04.2023ರಂದು ನೀಡಿರುವ ಮಧ್ಯಂತರ ಆದೇಶ ಹಾಗೂ ಅಂತಿಮ ಆದೇಶ:17.12.2025.
3. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್.ಸಿ.ಎಸ್:ಐಸಿಡಿಪಿ:ಸಂ.ಸಂ-1:143:2025-26, ದಿನಾಂಕ:06.02.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರಲ್ಲಿ ಜ್ಯೋತಿಪಣ ಯುವಜನ ಸಂಘ, ಗಾಣಿಗಾರ ವಿದ್ಯಾರ್ಥಿ ನಿಲಯ 6ನೇ ಮುಖ್ಯ ರಸ್ತೆ, ಈಜುಕೋಳದ ರಸ್ತೆ, ಸರಸ್ವತಿಪುರಂ, ಮೈಸೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲಾಗಿತ್ತು.

ಸದರಿ ಆದೇಶವನ್ನು ಪ್ರಶ್ನಿಸಿ ಮೇಲೆ ಓದಲಾದ ಕ್ರಮಾಂಕ (2)ರ ಮಧ್ಯಂತರ ಆದೇಶದಲ್ಲಿ ಯಥಾಸ್ಥಿತಿಯನ್ನು ಕಾಯ್ದುಕೊಳ್ಳುವಂತೆ ಆದೇಶಿಸಿದ್ದು, ಅಂತಿಮ ಆದೇಶದಲ್ಲಿ it is open for

the competent authority to take decision in the matter in accordance with law ಎಂದು ತೀರ್ಪು ನೀಡಿ ಪ್ರಕರಣವನ್ನು ಇತ್ಯರ್ಥಪಡಿಸಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(3)ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಜ್ಯೋತಿಪಣ ಯುವಜನ ಸಂಘ, ಗಾಣಿಗಾರ ವಿದ್ಯಾರ್ಥಿ ನಿಲಯ, 6ನೇ ಮುಖ್ಯ ರಸ್ತೆ, ಈಜುಕೊಳದ ರಸ್ತೆ, ಸರಸ್ವತಿಪುರಂ, ಮೈಸೂರು ಈ ಸಂಘಕ್ಕೆ ಸಹಕಾರ ಅಭಿವೃದ್ಧಿ ಅಧಿಕಾರಿ ನಂಜನಗೂಡು ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಸದರಿ ಸಂಘದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:6876/2023 ರ ಆದೇಶದಲ್ಲಿ ಯಥಾಸ್ಥಿತಿ ಕಾಪಾಡುವಂತೆ ಆದೇಶಿರುವುದರಿಂದ ಸಂಘದ ಆಡಳಿತಾಧಿಕಾರಿ ಹುದ್ದೆಯ ಪ್ರಭಾರವನ್ನು ಪಡೆಯಲು ಸಾಧ್ಯವಾಗಿರುವುದಿಲ್ಲವೆಂದು, ಶ್ರೀ ರಘು ಬಿನ್ ರಂಗಶೆಟ್ಟಿ ಮೈಸೂರು ಇವರ ದಿನಾಂಕ:05/01/2026 ರ ಪತ್ರದಲ್ಲಿ, ಸದರಿ ಸಂಘದ ಆಡಳಿತಾಧಿಕಾರಿ ನೇಮಕಕ್ಕೆ ನೀಡಿರುವ ತಡೆಯಾಜ್ಞೆಯನ್ನು ಗೌರವ ಉಚ್ಚನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ:6876/2023 ರಲ್ಲಿ ದಿನಾಂಕ:17/12/2025ರ ಆದೇಶದಲ್ಲಿ ತೆರವುಗೊಳಿಸಿರುವುದರಿಂದ ಸದರಿ ಸಂಘಕ್ಕೆ ತಕ್ಷಣ ಆಡಳಿತಾಧಿಕಾರಿಯನ್ನು ನೇಮಿಸಿ ಚುನಾವಣೆಯನ್ನು ನಡೆಸಿ, ಹೊಸ ಕಾರ್ಯಕಾರಿ ಸಮಿತಿಯನ್ನು ಆಯ್ಕೆ ಮಾಡಿಕೊಡಬೇಕೆಂದು ಕೋರಿರುವುದಾಗಿ ತಿಳಿಸಿ, ಸದರಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿ ಚುನಾವಣೆಯನ್ನು ನಡೆಸಲು ಅನುಕೂಲವಾಗುವಂತೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ಪ್ರಕರಣ 27ಎ ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಸಿಒ 12 ಸಿಎಸ್ಆರ್ 2023, ದಿನಾಂಕ:16.03.2023ರಲ್ಲಿ ನೇಮಿಸಲಾಗಿದ್ದ ಆಡಳಿತಾಧಿಕಾರಿಯು ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:6876/2023ರಲ್ಲಿ ದಿನಾಂಕ:06.04.2023ರಂದು ನೀಡಿರುವ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಸಂಘದ ಪ್ರಭಾರವನ್ನು ವಹಿಸಿಕೊಳ್ಳಲು ಸಾಧ್ಯವಾಗದೇ ಇರುವುದರಿಂದ ಹಾಗೂ ಮಾನ್ಯ ನ್ಯಾಯಾಲಯವು ದಿನಾಂಕ:17.12.2025ರಂದು it is open for the competent authority to take decision in the matter in accordance with law ಎಂದು ತೀರ್ಪು ನೀಡಿ ಪ್ರಕರಣವನ್ನು ಇತ್ಯರ್ಥಪಡಿಸಿರುವುದರಿಂದ ಹಾಗೂ ಸಂಘದ ಆಡಳಿತ ಮಂಡಳಿಯು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ.11 ರಂತೆ ಕಾಲಕಾಲಕ್ಕೆ ವಾರ್ಷಿಕ ಸರ್ವ ಸದಸ್ಯರ ಮಹಾಸಭೆಯನ್ನು ನಡೆಸಲು ವಿಫಲರಾಗಿದ್ದು, 2011-12ನೇ ಸಾಲಿನಿಂದ ಕಲಂ.13 ರಂತೆ ಸಂಘದ ಲೆಕ್ಕಪತ್ರಗಳನ್ನು ಸಕ್ಷಮ ಪ್ರಾಧಿಕಾರದಲ್ಲಿ ಫೈಲಿಂಗ್ ಮಾಡಲು ವಿಫಲರಾಗಿರುತ್ತಾರೆ. ಇದು ಕಾಯ್ದೆಯ ಕಲಂ.11 ಮತ್ತು 13 ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಈ

ಹಿನ್ನೆಲೆಯಲ್ಲಿ, ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡಿ, ಆಡಳಿತಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ ಚುನಾವಣೆಯನ್ನು ನಡೆಸಿ ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು, ಜ್ಯೋತಿಪಣ ಯುವಜನ ಸಂಘ, ಗಾಣಿಗಾರ ವಿದ್ಯಾರ್ಥಿ ನಿಲಯ 6ನೇ ಮುಖ್ಯ ರಸ್ತೆ, ಈಜುಕೋಳದ ರಸ್ತೆ, ಸರಸ್ವತಿಪುರಂ, ಮೈಸೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 12 ಸಿಎಸ್‌ಆರ್ 2023

ಬೆಂಗಳೂರು, ದಿನಾಂಕ:28ನೇ ಏಪ್ರಿಲ್ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಪತ್ರದಲ್ಲಿ ಜ್ಯೋತಿಪಣ ಯುವಜನ ಸಂಘ(ನೋಂದಣಿ ಸಂಖ್ಯೆ:2341/59-60), ಗಾಣಿಗರ ವಿಧ್ಯಾರ್ಥಿ ನಿಲಯ, 6ನೇ ಮುಖ್ಯ ರಸ್ತೆ, ಈಜುಕೊಳದ ರಸ್ತೆ, ಸರಸ್ವತಿಪುರಂ, ಮೈಸೂರು-570009 ಈ ಸಂಘಕ್ಕೆ ಶ್ರೀ ವಸಂತಕುಮಾರ್ ಎಸ್., ಸಹಕಾರ ಅಭಿವೃದ್ಧಿ ಅಧಿಕಾರಿ, ನಂಜನಗೂಡು ತಾಲ್ಲೂಕು, ಇವರನ್ನು ಈ ಆದೇಶದ ದಿನಾಂಕದಿಂದ ಮುಂದಿನ ಆರು ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-166

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂ. ಸಿ�ಒ 26 ಸಿಎಸ್‌ಆರ್ 2024, ದಿನಾಂಕ:15.09.2025.

2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂ: ಜಂ.ನಿ/(ಐಸಿಡಿಪಿ)/ಸಂ.ಸಂ-02/161/2023-24, ದಿನಾಂಕ:06.04.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ದಿನಾಂಕ:15.09.2025ರಂದು ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿದ್ದು, ಆಡಳಿತಾಧಿಕಾರಿಯವರ ಅವಧಿಯು ದಿನಾಂಕ:14.03.2026ಕ್ಕೆ ಮುಕ್ತಾಯಗೊಂಡಿರುವುದರಿಂದ, ಸಂಘದ ವಿರುದ್ಧ ದಾಖಲಾಗಿರುವ ದೂರು ಅರ್ಜಿಗಳಿಗೆ ಸಂಬಂಧಿಸಿದಂತೆ ಕಲಂ-25ರಡಿ ವಿಚಾರಣಾ ವರದಿಯನ್ವಯ ಸಂಬಂಧಪಟ್ಟವರ ವಿರುದ್ಧ ಕ್ರಮವಹಿಸಬೇಕಾಗಿರುವುದರಿಂದ ಹಾಗೂ ಸಂಘದ ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುವುದರಿಂದ ಆಡಳಿತಾಧಿಕಾರಿಯವರ ಅವಧಿಯನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿಯ ಅವಧಿಯು ದಿನಾಂಕ:14.03.2026ಕ್ಕೆ ಮುಕ್ತಾಯಗೊಳ್ಳಂಡಿರುವುದರಿಂದ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಶಿಫಾರಸ್ಸಿನಂತೆ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:15.03.2026 ರಿಂದ ಮುಂದಿನ 4 ತಿಂಗಳ ಅವಧಿಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 26 ಸಿಎಸ್ಆರ್ 2024

ಬೆಂಗಳೂರು, ದಿನಾಂಕ: 28ನೇ ಏಪ್ರಿಲ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ಈ ಸಂಘದ ಚುನಾವಣೆ ನಡೆಸಲು ಅಂತಿಮವಾಗಿ ದಿನಾಂಕ:15.03.2026 ರಿಂದ ಮುಂದಿನ 4 (ನಾಲ್ಕು) ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-167

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಬನ್ನೇರುಘಟ್ಟ, ಬೆಂಗಳೂರು ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ 27(ಎ)ರಡಿ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-
1. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಆರ್ಸಿಎಸ್/ಸಂಸಂ-02/271/2025-26, ದಿನಾಂಕ:20.02.2026.
2. ಸರ್ಕಾರದ ನೋಟೀಸ್ ಸಂಖ್ಯೆ:ಸಿಒ 54 ಸಿಎಸ್ಆರ್ 2026, ದಿನಾಂಕ:23.03.2026 ಮತ್ತು ಅಂತಿಮ ನೋಟಿಸ್ ದಿನಾಂಕ:23.03.2026.
3. ಅಧ್ಯಕ್ಷರು ಮತ್ತು ಕಾರ್ಯದರ್ಶಿ, ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಬನ್ನೇರುಘಟ್ಟ, ಬೆಂಗಳೂರು ಇವರ ಸಮಜಾಯಿಷಿಗಳ ದಿನಾಂಕ:26.03.2026 ಮತ್ತು 08.04.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಶ್ರೀ ಸೀತಾರಾಮ ಕನ್ವೆನ್ಷನ್ ಹಾಲ್. ನಂ.160. ಕೆಂಪನಾಯಕನಹಳ್ಳಿ, ಬನ್ನೇರುಘಟ್ಟ ರಸ್ತೆ, ಬನ್ನೇರುಘಟ್ಟ, ಬೆಂಗಳೂರು-560083, ಈ ಸಂಘದ ವಿರುದ್ಧ ಡಾ|| ಉಮೇಶ್ವರ್ ಕೆ. ಮತ್ತು ಇತರರಿಂದ ಸಂಘವು ಕಳೆದ 7 ವರ್ಷಗಳಿಂದ ಸಾಮಾನ್ಯ ಸಭೆಯನ್ನು ಹಾಗೂ ಚುನಾವಣೆಯನ್ನು ಜರುಗಿಸಿರುವುದಿಲ್ಲವೆಂದು ದೂರು ಅರ್ಜಿಯನ್ನು

ಸಲ್ಲಿಸಿದ್ದು, ಸದರಿ ದೂರು ಅರ್ಜಿಯಲ್ಲಿನ ಅಂಶಗಳ ಬಗ್ಗೆ ವಿಚಾರಣೆ ಜರುಗಿಸಲಾಗಿದ್ದು, ಸಂಘವು ದಿನಾಂಕ:11-08-2024 ರಂದು ಶ್ರೀ ಸೀತಾರಾಮ ಕನ್ವೆನ್ಷನ್ ಹಾಲ್, ನಂ.160, ಕೆಂಪನಾಯಕನಹಳ್ಳಿ, ಬನ್ನೇರಘಟ್ಟ ರಸ್ತೆ, ಬೆಂಗಳೂರು ಇಲ್ಲಿ ಸಂಘದ ಮಹಾಸಭೆ, ಲೆಕ್ಕಪತ್ರ ಮಂಡನೆ ಮತ್ತು ನೂತನ ಕಾರ್ಯಕಾರಿ ಸಮಿತಿ ರಚನೆ ಕುರಿತು ನೋಟೀಸ್ ನೀಡಿರುವುದು ಕಂಡುಬಂದಿದ್ದು, ಸದರಿ ನೋಟೀಸನ್ನು ಸಂಘದ ಎಲ್ಲಾ ಸದಸ್ಯರಿಗೆ ತಲುಪಿಸಿರುವುದಿಲ್ಲವೆಂದು ಹಾಗೂ ಸಂಘವು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 13 ರ ಅವಕಾಶಗಳನ್ವಯ ಸಂಘದ ಲೆಕ್ಕಪತ್ರಗಳು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರ ಪಟ್ಟಿಯನ್ನು ಸಲ್ಲಿಸಿರುವುದಿಲ್ಲವೆಂದು ಹಾಗೂ ಸಂಘವು ವಿಚಾರಣೆ ಸಮಯದಲ್ಲಿ 2018-19 ನೇ ಸಾಲಿನಿಂದ 2023-24 ನೇ ಸಾಲಿನವರೆಗೆ ಲೆಕ್ಕಪತ್ರಗಳನ್ನು ಸಲ್ಲಿಸಿದ್ದು, 2018-19ನೇ ಸಾಲಿನಿಂದ 2023-24 ನೇ ಸಾಲುಗಳ ಸರ್ವ ಸದಸ್ಯರ ಸಭೆಯನ್ನು ಎಲ್ಲಾ ಸದಸ್ಯರಿಗೂ ರವಾನಿಸಿರುವ ಕುರಿತು ದಾಖಲಾತಿ ಮತ್ತು ಸಭೆಗೆ ಹಾಜರಾದ ಸದಸ್ಯರುಗಳ ಸಹಿ ಮಾಡಲಾದ ಹಾಜರಾತಿ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲವೆಂದು, ಸಂಘವು ಪ್ರತಿ ವರ್ಷವು ಸಂಘದ ಆಡಳಿತ ವರದಿಯೊಂದಿಗೆ ಆಯವ್ಯಯ ಪಟ್ಟಿಯ ಪ್ರತಿ, ಆದಾಯ ವೆಚ್ಚದ ಲೆಕ್ಕ ಹಾಗೂ ಲೆಕ್ಕಪರಿಶೋಧಕರ ವರದಿಗಳನ್ನು ಅನುಮೋದನೆ ಪಡೆಯುವುದು ಮತ್ತು ಬೈಲಾ ಅವಕಾಶಗಳನ್ವಯ ಪ್ರತಿ ವರ್ಷ ನಿಯಮಾನುಸಾರ ಸಾಮಾನ್ಯ ಸಭೆ ಹಾಗೂ ಚುನಾವಣೆಯನ್ನು ನಡೆಸಲು ವಿಫಲವಾಗಿರುವುದು ದೃಢಪಟ್ಟಿರುವುದರಿಂದ ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ-27(ಎ)ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ(2) ರನ್ವಯ ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಶ್ರೀ ಸೀತಾರಾಮ ಕನ್ವೆನ್ಷನ್ ಹಾಲ್, ನಂ.160. ಕೆಂಪನಾಯಕನಹಳ್ಳಿ, ಬನ್ನೇರುಘಟ್ಟ ರಸ್ತೆ, ಬನ್ನೇರುಘಟ್ಟ, ಬೆಂಗಳೂರು-560083, ಈ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಿಸಬಾರದು? ಎಂಬ ಬಗ್ಗೆ ನೋಟೀಸ್ ನೀಡಿ, ಲಿಖಿತ ಸಮಜಾಯಿಷಿಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಿದ್ದು, ಪುನಃ 10 ದಿನಗಳ ಕಾಲಾವಕಾಶ ನೀಡಿ ಅಂತಿಮ ನೋಟೀಸ್ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರಗಳಲ್ಲಿ ಸಂಘದ ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿ, ಸೊಸೈಟಿಯು ನಿಯಮಿತವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಘದ ಉಪ-ಕಾನೂನುಗಳ ನಿಬಂಧನೆಗಳಿಗೆ ಅನುಸಾರವಾಗಿ ಸಾಮಾನ್ಯ ಸಭೆಗಳನ್ನು ನಡೆಸಿದೆ. 2018-19 ರಿಂದ 2021-22ರ ಅವಧಿಯಲ್ಲಿ, COVID-19 ಸಾಂಕ್ರಾಮಿಕ ರೋಗ ಮತ್ತು ಸರ್ಕಾರ ವಿಧಿಸಿದ ನಿರ್ಬಂಧಗಳಿಂದಾಗಿ ವಾರ್ಷಿಕ ಸಾಮಾನ್ಯ ಸಭೆಗಳ (AGM) ನಡವಳಿಯ ಮೇಲೆ ಪ್ರತಿಕೂಲ ಪರಿಣಾಮವಾಗಿದೆ. ಸಂಘವು ತನ್ನ ಸದಸ್ಯರ ಪೂರ್ಣ ಭಾಗವಹಿಸುವಿಕೆಯೊಂದಿಗೆ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಸಂಘವು ದಿನಾಂಕ:17.12.2023 ರಂದು ತನ್ನ ಸುವರ್ಣ ಮಹೋತ್ಸವವನ್ನು ಆಚರಿಸಿದ್ದು, ಇದರಲ್ಲಿ ಸೊಸೈಟಿಯ ಹೆಚ್ಚಿನ ಸಂಖ್ಯೆಯ ಸದಸ್ಯರು ಭಾಗವಹಿಸಿದ್ದರು. ಇತ್ತೀಚಿನ ತುರ್ತು ಸಾಮಾನ್ಯ ಸಭೆಯನ್ನು ದಿನಾಂಕ:28.02.2026 ರಂದು ನಡೆಸಿದ್ದು, ಈ ಸಮಯದಲ್ಲಿ ಖಜಾಂಚಿಯವರು ದಿನಾಂಕ:31.03.2025 ಕ್ಕೆ ಕೊನೆಗೊಂಡ ವರ್ಷದ ಲೆಕ್ಕಪರಿಶೋಧಿತ ಹಣಕಾಸು ವರದಿಯನ್ನು ಮಂಡಿಸುತ್ತಿದ್ದಾಗ, ಕೆಲವು ವ್ಯಕ್ತಿಗಳು (ದೂರುದಾರರಲ್ಲಿ ಒಬ್ಬರು), ಉದ್ದೇಶಪೂರ್ವಕವಾಗಿ ಸಭೆಯ

ಕಲಾಪಗಳಿಗೆ ಅಡ್ಡಿಪಡಿಸಿದರು. ಸೊಸೈಟಿಯು ಪಾರದರ್ಶಕವಾಗಿ ಮತ್ತು ಉತ್ತಮ ನಂಬಿಕೆಯಿಂದ ಕಾರ್ಯನಿರ್ವಹಿಸಿದ್ದು, ತಪಾಸಣೆಯ ಸಮಯದಲ್ಲಿ ದಾಖಲೆಗಳಿಗೆ ಸಂಬಂಧಿಸಿದಂತೆ ಸೊಸೈಟಿ ಕಛೇರಿಯ ವಿವಿಧ ಫೈಲ್‌ಗಳು ಮತ್ತು ಆರ್ಕೈವ್‌ಗಳಲ್ಲಿ ದಾಖಲೆಗಳನ್ನು ನಿರ್ವಹಿಸಲಾಗುತ್ತಿರುವುದರಿಂದ ಕೆಲವು ದಾಖಲೆಗಳು ತಕ್ಷಣ ಲಭ್ಯವಿಲ್ಲದಿರಬಹುದು ಆದಾಗ್ಯೂ, ಸೊಸೈಟಿಯು ಎಲ್ಲಾ ಶಾಸನಬದ್ಧ ದಾಖಲೆಗಳನ್ನು ನಿರ್ವಹಿಸುತ್ತದೆ. ಹಣಕಾಸಿನ ಅಕ್ರಮ ಅಥವಾ ದುರುಪಯೋಗದ ಬಗ್ಗೆ ಯಾವುದೇ ಆರೋಪ ಅಥವಾ ಪುರಾವೆಗಳಿಲ್ಲ. ದೂರುದಾರರ ದುರುದ್ದೇಶಪೂರಿತವಾಗಿ ತಪ್ಪಾದ ಮತ್ತು ಅಪ್ರಸ್ತುತ ದಾಖಲೆಗಳನ್ನು ಸಾಕ್ಷಿಯಾಗಿ ಸಲ್ಲಿಸಿದ್ದು, ಅಸ್ತಿತ್ವದಲ್ಲಿರುವ ವ್ಯವಸ್ಥಾಪಕ ಸಮಿತಿಯನ್ನು ಪ್ರಚೋದಿಸುವ ಮತ್ತು ಅಸ್ಥಿರಗೊಳಿಸುವ ಉದ್ದೇಶದಿಂದ ಮತ್ತು ಸಮುದಾಯ ಮತ್ತು ಸಂಘದ ಸದಸ್ಯರಲ್ಲಿ ಅನಗತ್ಯ ಭಿನ್ನಾಭಿಪ್ರಾಯವನ್ನು ಸೃಷ್ಟಿಸಲಾಗಿದೆ ಎಂದು ತಿಳಿಸಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಕೈಬಿಡಲು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರು ಸಲ್ಲಿಸಿರುವ ದಾಖಲೆಗಳಲ್ಲಿ ದಿನಾಂಕ:11.08.2024ರಂದು ಸಭೆ ನಡೆಸಿರುವ ದಾಖಲೆಗಳನ್ನು ಹಾಗೂ ದಿನಾಂಕ:28.02.2026ರಂದು ನಡೆದ ವಿಶೇಷ ಮಹಾಸಭೆಯ ದಾಖಲೆಗಳನ್ನು ಸಲ್ಲಿಸಿದ್ದು, 2023-24 ಮತ್ತು 2024-25ನೇ ಸಾಲಿನ ಅಡಿಟ್ ವರದಿಯನ್ನು ಮಾತ್ರ ಸಲ್ಲಿಸಿದ್ದು, ಉಳಿದಂತೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲ. ಉಪ ನಿಬಂಧಕರ ವರದಿಯಂತೆ ಸಂಘವು ವಿಚಾರಣೆ ವೇಳೆಯಲ್ಲಿ 2018-2019ನೇ ಸಾಲಿನಿಂದ 2023-24ನೇ ಸಾಲಿನವರೆಗೆ ಲೆಕ್ಕ ಪರಿಶೋಧನಾ ವರದಿಗಳನ್ನು ಸಲ್ಲಿಸಿದ್ದು, 2018-2019ನೇ ಸಾಲಿನಿಂದ 2023-24ನೇ ಸಾಲುಗಳ ಸರ್ವ ಸದಸ್ಯರ ಸಭೆಯ ಸೂಚನಾ ಪತ್ರವನ್ನು ಎಲ್ಲಾ ಸದಸ್ಯರಿಗೂ ರವಾನಿಸಿರುವ ಕುರಿತು ದಾಖಲಾತಿ ಮತ್ತು ಸಭೆಗೆ ಹಾಜರಾದ ಸದಸ್ಯರುಗಳ ಸಹಿ ಮಾಡಲಾದ ಹಾಜರಾತಿ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಇಲಾಖೆಯ ನಿರ್ದೇಶನದನ್ವಯ ಸಂಘವು ನಿಯಮಾನುಸಾರ ವಿಶೇಷ ಸರ್ವ ಸದಸ್ಯರ ಸಭೆಯನ್ನು ಕರೆದು ಸದಸ್ಯರ ಮನವಿಯ ಅಂಶಗಳ ಬಗ್ಗೆ ಕ್ರಮವಹಿಸಿ ವರದಿ ಸಲ್ಲಿಸಿರುವುದಿಲ್ಲ. ಸಾಮಾನ್ಯ ಸಭೆಯಲ್ಲಿ ಲೆಕ್ಕಪರಿಶೋಧನೆ ಮಾಡಲ್ಪಟ್ಟ ಹಿಂದಿನ ಆಡಳಿತ ವರದಿಯೊಂದಿಗೆ ಆಯವ್ಯಯ ಪಟ್ಟಿಯ ಪ್ರತಿ, ಆದಾಯ, ವೆಚ್ಚದ ಲೆಕ್ಕ ಮತ್ತು ಲೆಕ್ಕಪರಿಶೋಧಕರ ವರದಿಗಳನ್ನು ಅನುಮೋದನೆ ಪಡೆಯಲು ಮತ್ತು ಬೈಲಾ ಅವಕಾಶದನ್ವಯ ಚುನಾವಣೆ ನಡೆಸುವ ಉದ್ದೇಶಕ್ಕಾಗಿ ಸಾಮಾನ್ಯ ಸಭೆಯ ದಿನಾಂಕಕ್ಕಿಂತ ಇಪ್ಪತ್ತೊಂದು ದಿವಸ ಮೊದಲು, ಮುದ್ರಿತ ಅಥವಾ ಕೈಬರಹದ ನೋಟೀಸನ್ನು ಪ್ರತಿಯೊಬ್ಬ ಸದಸ್ಯನಿಗೆ ತಲುಪಿಸಿ ಅಥವಾ ಅಂಚೆ ಮೂಲಕ ಕಳಿಸಿರುವ ದಾಖಲಾತಿಗಳು ಮತ್ತು ಸಾಮಾನ್ಯ ಸಭೆಗೆ ಹಾಜರಾದ ಸದಸ್ಯರ ಹಾಜರಾತಿಯನ್ನು ಸಲ್ಲಿಸದಿರುವ ಹಿನ್ನೆಲೆಯಲ್ಲಿ ಸಂಘವು ಪ್ರತಿವರ್ಷ ನಿಯಮಾನುಸಾರ ಸಾಮಾನ್ಯ ಸಭೆಯನ್ನು ನಡೆಸಲು ಹಾಗೂ ಚುನಾವಣೆಯನ್ನು ನಡೆಸಲು ವಿಫಲವಾಗಿರುವುದು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಹಾಗೂ ಸಂಘದ ಅಧ್ಯಕ್ಷರು ಮತ್ತು ಕಾರ್ಯದರ್ಶಿಯವರು ಸಲ್ಲಿಸಿರುವ ಸಮಜಾಯಿಷಿಯನ್ನು ಸಮರ್ಥಿಸುವ ಯಾವುದೇ ದಾಖಲೆಗಳನ್ನು ಸಲ್ಲಿಸದೇ ಇರುವುದರಿಂದ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಶಿಫಾರಸ್ಸನ್ನು ಪರಿಗಣಿಸಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960 ರ ಕಲಂ-27(ಎ) ರನ್ವಯ ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಶ್ರೀ ಸೀತಾರಾಮ ಕನ್ವೆನ್ಷನ್ ಹಾಲ್, ನಂ.160, ಕೆಂಪನಾಯಕನಹಳ್ಳಿ, ಬನ್ನೇರಘಟ್ಟ ರಸ್ತೆ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನಾಗಿ

ಶ್ರೀ ಹಮೀದ್ ಉಲ್ಲಾಖಾನ್, ಸಹಕಾರ ಅಭಿವೃದ್ಧಿ ಅಧಿಕಾರಿ ಹಾಗೂ ಮಾರಾಟಾಧಿಕಾರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, 3ನೇ ವಲಯ, ಬೆಂಗಳೂರು ಇವರನ್ನು ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 54 ಸಿಎಸ್‌ಆರ್ 2026
ಬೆಂಗಳೂರು, ದಿನಾಂಕ:24ನೇ ಏಪ್ರಿಲ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಶ್ರೀ ರಾಮರಾಜ ಕ್ಷತ್ರಿಯ ಸೇವಾ ಸಂಘ, ಶ್ರೀ ಸೀತಾರಾಮ ಕನ್ವೆನ್ಷನ್ ಹಾಲ್, ನಂ.160, ಕೆಂಪನಾಯಕನಹಳ್ಳಿ, ಬನ್ನೇರಘಟ್ಟ ಮುಖ್ಯರಸ್ತೆ, ಬನ್ನೇರಘಟ್ಟ, ಬೆಂಗಳೂರು ಈ ಸಂಘಕ್ಕೆ ಶ್ರೀ ಹಮೀದ್ ಉಲ್ಲಾಖಾನ್, ಸಹಕಾರ ಅಭಿವೃದ್ಧಿ ಅಧಿಕಾರಿ ಹಾಗೂ ಮಾರಾಟಾಧಿಕಾರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, 3ನೇ ವಲಯ, ಬೆಂಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-168

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ : ಕರ್ನಾಟಕ ರಾಜ್ಯ ಸವಿತಾ ಸಮಾಜ, ನಂ.21, ಸವಿತಾ ಭವನ, ಜರ್ನಲಿಸ್ಟ್ ಕಾಲೋನಿ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಇ 129 ಸಸಂನೋ 2016, ದಿನಾಂಕ: 02.04.2024, 07.12.2024, 23.04.2025 ಮತ್ತು 05.11.2025.
2. ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂ: ಡಿಆರ್‌ಬಿ-2/ಸಂ.ಸಂ/ಆ.ನೇ/01/2018-19, ದಿನಾಂಕ:13.02.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ರಾಜ್ಯ ಸವಿತಾ ಸಮಾಜ, ಬೆಂಗಳೂರು ಈ ಸಂಘಕ್ಕೆ ಶ್ರೀ ಹರೀಶ್ ಕುಮಾರ್, ಸಹಕಾರ ಅಭಿವೃದ್ಧಿ ಅಧಿಕಾರಿ,

ಆನೇಕಲ್ ಇವರನ್ನು ಆರು ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಲಾಗಿತ್ತು. ನಂತರ ಕಾಲಕಾಲಕ್ಕೆ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:6455/2025ರ ಆದೇಶದಂತೆ ಸಂಘದ 2003ರ ಬೈಲಾ ರೀತ್ಯ ಚುನಾವಣೆಯನ್ನು ನಡೆಸಲು ಮತದಾರರ ಪಟ್ಟಿ ಸಿದ್ಧ ಪಡಿಸಬೇಕಾಗಿರುವುದರಿಂದ ತಾಲ್ಲೂಕು, ಜಿಲ್ಲಾವಾರು ಮತದಾರರ ಪಟ್ಟಿ ತಯಾರಿಸಲು ಹಾಗೂ ಚುನಾವಣೆ ನಡೆಸಲು ಸಾಕಷ್ಟು ಕಾಲಾವಕಾಶದ ಅವಶ್ಯಕತೆ ಇರುವ ಹಿನ್ನಲೆಯಲ್ಲಿ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:02.04.2026 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:01.04.2026ಕ್ಕೆ ಮುಕ್ತಾಯಗೊಂಡಿರುವುದರಿಂದ ಉಪ ನಿಬಂಧಕರ ಶಿಫಾರಸ್ಸಿನಂತೆ ಕರ್ನಾಟಕ ರಾಜ್ಯ ಸವಿತಾ ಸಮಾಜ, ನಂ.21, ಸವಿತಾ ಭವನ, ಜರ್ನಲಿಸ್ಟ್ ಕಾಲೋನಿ, ಬೆಂಗಳೂರು ಈ ಸಂಘದ ಚುನಾವಣೆ ನಡೆಸಲು ಆಡಳಿತಾಧಿಕಾರಿಯ ಅವಧಿಯನ್ನು ಅಂತಿಮವಾಗಿ ದಿನಾಂಕ:02.04.2026 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 109 ಸಿಎಸ್‌ಆರ್ 2025,
ಬೆಂಗಳೂರು, ದಿನಾಂಕ: 02ನೇ ಮೇ 2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ರಾಜ್ಯ ಸವಿತಾ ಸಮಾಜ, ನಂ.21, ಸವಿತಾ ಭವನ, ಜರ್ನಲಿಸ್ಟ್ ಕಾಲೋನಿ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ಅಂತಿಮವಾಗಿ ದಿನಾಂಕ:02.04.2026 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಮಾಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-169

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ, ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ-1960ರ ಕಲಂ 27(ಎ)ರಡಿ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-

1. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಆರ್.ಸಿ.ಎಸ್:ಜಂ.ನಿ/ಐಸಿಡಿಪಿ/ಸಂ.ಸಂ-04/ಆ.ನೇ:07:2023-24, ದಿನಾಂಕ:12.11.2024.
2. ಸರ್ಕಾರದ ನೋಟೀಸ್ ಸಂಖ್ಯೆ:ಸಿಒ 276 ಸಿಎಸ್ಆರ್ 2024, ದಿನಾಂಕ:30.11.2024.
3. ಅಧ್ಯಕ್ಷರು, ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ ಇವರ ಸಮಜಾಯಿಷಿ ದಿನಾಂಕ:21.12.2024.
4. ಸರ್ಕಾರದ ಪತ್ರ ಸಂಖ್ಯೆ: ಸಿಒ 276 ಸಿಎಸ್ಆರ್ 2024, ದಿನಾಂಕ: 15.09.2025.
5. ಸಹಕಾರ ಸಂಘಗಳ ಉಪ ನಿಬಂದಕರು, ಯಾದಗಿರಿ ಜಿಲ್ಲೆ ಇವರ ಕಛೇರಿಯ ಪತ್ರ ಸಂಖ್ಯೆ:ಉನಿಯಾ/ವಿ3/ನವೀಕರಣ/2024-25/1263, ದಿನಾಂಕ:02.03.2026.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1) ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ ಈ ಸಂಘದ ವಿರುದ್ಧದ ದೂರರ್ಜಿಯನ್ನು ಪರಿಶೀಲಿಸಲಾಗಿದ್ದು, ಸದರಿ ಸಂಘದ ಉಪ ನಿಯಮ 9(2)ರನ್ವಯ ಪದಾಧಿಕಾರಿಗಳ ಅಧಿಕಾರಾವದಿ ಹಾಗೂ ಕಾರ್ಯನಿರ್ವಾಹಕರ ಕಾರ್ಯಾವದಿಯು 10ವರ್ಷಗಳಾಗಿದ್ದು, ಸಂಘದಲ್ಲಿ ಎರಡು ಬಣಗಳಿದ್ದು, ಮಾನ್ಯ ಜೆ.ಎಂ.ಎಫ್.ಸಿ ಅಡಿಷನಲ್ ಸಿವಿಲ್ ನ್ಯಾಯಾಲಯ ಶಹಾಪೂರ ಇದರ ಆದೇಶದಂತೆ ಸಂಘವು ಕ್ರಮವಹಿಸದೇ ಇರುವುದರಿಂದ ಸಂಘದ ವಿರುದ್ಧ ಪದೇಪದೇ ದೂರುಗಳು ಸ್ವೀಕೃತವಾಗುತ್ತಿದ್ದು, 2014ನೇ ಸಾಲಿನಿಂದ ಇಲ್ಲಿಯವರೆಗೂ ಸಂಘವು ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲವಾದ್ದರಿಂದ ಹಾಗೂ ಸಂಘವು ಹೊಂದಿರುವ ಆಸ್ತಿಯನ್ನು ಪಾಲನೆ ಮಾಡಲು ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮಾಂಕ(2) ರನ್ವಯ ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ ಈ ಸಂಘದ ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಿಸಬಾರದು? ಎಂಬ ಬಗ್ಗೆ ನೋಟೀಸ್ ನೀಡಿ, ಲಿಖಿತ ಸಮಜಾಯಿಷಿಯನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ, ಸಂಘದ ಅಧ್ಯಕ್ಷರು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿ, ಸಂಘದ ಚುನಾವಣೆಯು ದಿನಾಂಕ:22.06.2014ರಲ್ಲಿ ನಡೆದಿದ್ದು, ಸಂಘದ ಬೈಲಾದ ನಿಯಮ ಸಂಖ್ಯೆ.9(2)ರಂತೆ 10 ವರ್ಷದ ಅವಧಿಗೆ ಆಯ್ಕೆಯಾಗಿದ್ದು, ಈ ಮಧ್ಯೆ ಶ್ರೀ ರಾಜು ಎಂಬುವರು ಅಧಿಕಾರವಿಲ್ಲದಿದ್ದರೂ ಸಂಘದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಿ ಸಂಘದ ಸಮಿತಿಯ ಅವಧಿಯು ಕೇವಲ ಮೂರು ವರ್ಷಗಳೆಂದು, ಸಂಘದ ಆಡಳಿತ ನಡೆಸಲು ಸಮಿತಿಗೆ

ಅಧಿಕಾರವಿಲ್ಲವೆಂದು ದೂರಿದ್ದು, ಅದರಂತೆ ಸಿವಿಲ್ ನ್ಯಾಯಾಲಯದಲ್ಲಿ ಒ.ಎಸ್.ಸಂ.188/2017ನ್ನು ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ಶ್ರೀ ರಾಜು ರವರಿಗೆ ಸಂಘದ ಆಡಳಿತದಲ್ಲಿ ಹಸ್ತಕ್ಷೇಪ ಮಾಡದಂತೆ ದಿನಾಂಕ:16.07.2019ರ ಆದೇಶದಲ್ಲಿ ನಿರ್ದೇಶಿಸಿದ್ದು, ಸದರಿ ಆದೇಶಕ್ಕೆ ಮೇಲ್ಮನವಿ ಸಲ್ಲಿಸಲಾಗಿದ್ದು, ಸದರಿ ಮೇಲ್ಮನವಿಯು ವಜಾಗೊಂಡಿರುತ್ತದೆಂದು, ಒ.ಎಸ್.ಸಂ.188/2017ರ ಪ್ರಕರಣವು ಇತ್ಯರ್ಥಕ್ಕೆ ಬಾಕಿಯಿರುವುದರಿಂದ ಪ್ರಸ್ತುತ ಇರುವ ಕಾರ್ಯಕಾರಿ ಸಮಿತಿಯ ಸ್ಥಾನದಲ್ಲಿ ಆಡಳಿತಾಧಿಕಾರಿಯನ್ನು ನೇಮಿಸದಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(4)ರ ಪತ್ರದಲ್ಲಿ ಅಧ್ಯಕ್ಷರು, ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ, ಇವರ ಲಿಖಿತ ಹೇಳಿಕೆಯನ್ನು ಸಹಕಾರ ಸಂಘಗಳ ಉಪ ನಿಬಂಧಕರು, ಯಾದಗಿರಿ ಜಿಲ್ಲೆ ಇವರಿಗೆ ಕಳುಹಿಸಿ ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ, ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ ಸ್ಪಷ್ಟ ಅಭಿಪ್ರಾಯ ನೀಡುವಂತೆ ಕೋರಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಸಂಘದ ಅಧಿಕಾರ ಅವಧಿಯು ಮುಕ್ತಾಯಗೊಂಡಿದ್ದು, ಸಂಘದ ಬೈಲಾ ಉಲ್ಲಂಘನೆಯಾಗಿದ್ದು, ಸಂಘದ ಹೆಸರಿನಲ್ಲಿ ಆಸ್ತಿ ಇದ್ದು ಸದರಿ ಸಂಘದ ದೈನಂದಿನ ಕಾರ್ಯಚಟುವಟಿಕೆಗಳು ಹಾಗೂ ಲೆಕ್ಕ ಪತ್ರ ಸಮನ್ವಯ ಮಾಡಲು ಮತ್ತು ಸಂಘದ ಚುನಾವಣೆ ಮಾಡುವ ಹಿತದೃಷ್ಟಿಯಿಂದ ಸದರಿ ಸಂಘಕ್ಕೆ ಕರ್ನಾಟಕ ಸಂಘಗಳ ನೊಂದಣಿ ಅಧಿನಿಯಮ 1960ರ ಕಲಂ-27ಎ ರನ್ವಯ ಆಡಳಿತಾಧಿಕಾರಿ ನೇಮಿಸುವುದು ಸೂಕ್ತವಾಗಿರುತ್ತದೆ ಎಂದು ಅಭಿಪ್ರಾಯದ ವರದಿಯನ್ನು ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು, ಯಾದಗಿರಿ ಜಿಲ್ಲೆ ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ ಈ ಸಂಘಕ್ಕೆ ಶ್ರೀ ಶೇಖ ತಖಿವುದ್ದಿನ, ಪ್ರಭಾರಿ ಸಹಕಾರ ವಿಸ್ತರಣಾಧಿಕಾರಿ, ಶಹಾಪೂರ, ಯಾದಗಿರಿ ಜಿಲ್ಲೆ ಇವರನ್ನು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27(ಎ) ರನ್ವಯ 6 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಒ 276 ಸಿಎಸ್‌ಆರ್ 2024
ಬೆಂಗಳೂರು, ದಿನಾಂಕ:21ನೇ ಏಪ್ರಿಲ್ 2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಶ್ರೀ ಜಿಹ್ವೇಶ್ವರ ಸ್ವಕುಳ ಸಾಳಿ ಸಮಾಜ(ರಿ), ಶಹಾಪೂರ, ಯಾದಗಿರಿ ಜಿಲ್ಲೆ ಈ ಸಂಘಕ್ಕೆ ಶ್ರೀ ಶೇಖ ತಖಿವುದ್ದಿನ, ಪ್ರಭಾರಿ ಸಹಕಾರ ವಿಸ್ತರಣಾಧಿಕಾರಿ, ಶಹಾಪೂರ, ಯಾದಗಿರಿ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ನಿಯಮಾನುಸಾರ ಸರಿಪಡಿಸಿ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-170

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು (02) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

ಓದಲಾಗಿದೆ:

1. ಕಡತ ಸಂಖ್ಯೆ: ಲಾ-ಎಲ್‌ಸಿಎಲ್/125/2026.
2. ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/125/2026, ದಿನಾಂಕ : 02.04.2026.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರ ಕಛೇರಿ ಪತ್ರ ಸಂಖ್ಯೆ: No RK: 3910/2026, ದಿನಾಂಕ : 28.04.2026.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕಡತದಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು ನೋಟರಿ ಹುದ್ದೆಯನ್ನು ಸೃಜಿಸಲು ಪ್ರಸ್ತಾಪಿಸಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಪರಿಶೀಲಿಸಲು ಕೆಲವು ಅಂಶಗಳಿಗೆ ಮಾಹಿತಿ / ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 28.04.2026ರ ಪತ್ರದಲ್ಲಿ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಅವಶ್ಯಕತೆ ಇರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರ ಅಭಿಪ್ರಾಯ ಹಾಗೂ ಸವದತ್ತಿ ಕಂದಾಯ ತಾಲ್ಲೂಕಿನಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗನುಗುಣವಾಗಿ ನೋಟರಿಗಳ ನಿಯಮಗಳು, 1956ರ ನಿಯಮ 8(4A) ರನ್ವಯ ಸವದತ್ತಿ ಕಂದಾಯ ತಾಲ್ಲೂಕಿಗೆ ಸಾರ್ವಜನಿಕ ಹಿತಾಸಕ್ತಿ ಹಾಗೂ ಆಡಳಿತ ಹಿತದೃಷ್ಟಿಯಿಂದ ಹೊಸದಾಗಿ ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/125/2026, ಬೆಂಗಳೂರು, ದಿನಾಂಕ : 05-05-2026

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆಯ ಸವದತ್ತಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಎರಡು (02) ನೋಟರಿ ಹುದ್ದೆಯನ್ನು ಸೃಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

PR-171

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.

THAMMAIAH